ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

2

ಇಲಾಖೆ / ವಿಷಯ : DEPARTMENT / SUBJECT: ಮುಖ್ಯಮಂತ್ರಿ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ    ದಿನಾಂಕ : DATE : 17/9/2020

**ವಿಡಿಯೋ ಕಾನ್ಫರೆನ್ಸ್** ಬೆಂಗಳೂರಿನಲ್ಲಿ ಆರಂಭಕ್ಕೆ ಸಹಕಾರ | ಬಂಡವಾಳಕ್ಕೂ ಸ್ವಾಗತ

# ಅಮೆರಿಕ ದೂತಾವಾಸ ಆರಂಭಿಸಿ: ಸಿಎಂ

• **ಕನ್ನಡಪ್ರಭ ವಾರ್ತೆ**, ಬೆಂಗಳೂರು

ಬೆಂಗಳೂರಿನಲ್ಲಿ ಅಮೆರಿಕ ದೂತಾವಾಸ ಕಚೇರಿ ತೆರೆಯಲು ಅಗತ್ಯ ಸಹಕಾರ ಕೊಡುವುದಾಗಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಚೆನ್ನೈನಲ್ಲಿರುವ ಅಮೆರಿಕ ದೂತಾವಾಸದ ಕಾನ್ಸಲ್ ಜನರಲ್ ಜ್ಯುಡಿತ್ ರೇವಿನ್ ಅವರಿಗೆ ಭರವಸೆ ನೀಡಿದರು.

ಮಂಗಳವಾರ ಯುಎಸ್ ಕಾನ್ಸಲ್ ಜನರಲ್ ಜ್ಯುಡಿತ್ ರೇವಿನ್ ಅವರೊಂದಿಗೆ ವರ್ಚುಯಲ್ ಸಭೆ ನಡೆಸಿದ ಅವರು, ಬೆಂಗಳೂರಿನಲ್ಲಿ ಅಮೆರಿಲ ದೂತಾವಾಸ ಕಚೇರಿ ತೆರೆಯಬೇಕು ಎಂಬುದು ನಮ್ಮ ಬಹುದಿನಗಳ ಬೇಡಿಕೆಯಾಗಿದೆ. ಕಚೇರಿಯ ಸ್ಥಾಪನೆಗೆ ಅಗತ್ಯವಿರುವ ಸಹಕಾರ ನೀಡುತ್ತೇವೆ. ಜತೆಗೆ ಭಾರತದಲ್ಲಿರುವ 100 ಅಮೆರಿಕ ಸಂಸ್ಥೆಗಳ ಪೈಕಿ ಸಿಸ್ಕೋ, ಐಬಿಎಂ, ಇಂಟೆಲ್, ಜಿಇಎಚ್‌ಪಿ, ಒರಾಕಲ್, ಯುಟಿಸಿ ಸೇರಿದಂತೆ 90 ಕಂಪನಿಗಳು ಬೆಂಗಳೂರಿನಲ್ಲಿ ನೆಲೆಸಿವೆ. ಕರ್ನಾಟಕ ಬಂಡವಾಳ ಸ್ನೇಹಿ ರಾಜ್ಯವಾಗಿದ್ದು ಅಮೆರಿಕದಿಂದ ಹೆಚ್ಚಿನ ಬಂಡವಾಳವನ್ನು ಸ್ವಾಗತಿಸುತ್ತೇವೆ ಎಂದರು.



ಅಮೆರಿಕ ಕಾನ್ಸಲ್ ಜನರಲ್ ಜ್ಯುಡಿತ್ ರೇವಿನ್ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರೊಂದಿಗೆ ವರ್ಚುಯಲ್ ಸಭೆಯಲ್ಲಿ ಪಾಲ್ಗೊಂಡು ವಿವಿಧ ವಿಷಯಗಳ ಕುರಿತು ಚರ್ಚಿಸಿದರು.

**ಸಿಎಂಗೆ ಜುಡಿತ್ ಅಭಿನಂದನೆ:** ಇದೇ ಸಂದರ್ಭದಲ್ಲಿ ನವೋದ್ಯಮ ಶ್ರೇಯಾಂಕದಲ್ಲಿ ಕರ್ನಾಟಕ ಮೊದಲ ಸ್ಥಾನ ಪಡೆದಿರುವುದಕ್ಕೆ ಯಡಿಯೂರಪ್ಪ ಅವರನ್ನು ಅಭಿನಂದಿಸಿದ ಕಾನ್ಸಲ್ ಜನರಲ್ ಜ್ಯುಡಿತ್ ರೇವಿನ್, ಬಾಹ್ಯಾಕಾಶ ತಂತ್ರಜ್ಞಾನದಲ್ಲಿ ಸಹಯೋಗ, ಆರ್ಥಿಕ ವ್ಯವಹಾರಗಳ ವಿಸ್ತರಣೆ, ಕೋವಿಡ್ ಸಂದರ್ಭದಲ್ಲಿ ಆರೋಗ್ಯ ಸೇವೆ ಸೇರಿದಂತೆ ವಿವಿಧ ವಿಷಯಗಳ ಕುರಿತು ಚರ್ಚಿಸಿದರು.

**ಕನ್ನಡದಲ್ಲಿ ರೇವಿನ್ ಟ್ವೀಟ್!**

'ಧನ್ಯವಾದಗಳು ಕರ್ನಾಟಕದ ಸಿಎಂ ಯಡಿಯೂರಪ್ಪ ಅವರೇ! ಈ ಸಂವಾದದಲ್ಲಿ ಕರ್ನಾಟಕ ಬಾಹ್ಯಾಕಾಶ ತಂತ್ರಜ್ಞಾನದಲ್ಲಿ ಸಹಯೋಗ, ಯುಎಸ್ ಇಂಡಿಯಾ ವಾಣಿಜ್ಯ ಸಂಬಂಧ, ಕೋವಿಡ್ ವೇಳೆ ಆರೋಗ್ಯ ಸೇವೆ ಸೇರಿ ಹಲ ವಿಷಯಗಳ ಬಗ್ಗೆ ಚರ್ಚಿಸಿದೆವು' ಎಂದು ರೇವಿನ್ ಟ್ವೀಟಿಸಿದ್ದಾರೆ.